ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಮಂಗಳವಾರ, ದಿನಾಂಕ: 23ನೇ ಜುಲೈ, 2019

ಕೃಷ್ಣಾ ಮೇಲ್ದಂಡೆ ಯೋಜನೆಯ ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) -

103 (488) ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕøತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ಅನುಷ್ಠಾನಕ್ಕಾಗಿ ಹೊಸದಾಗಿ ನಿರ್ಮಿಸುತ್ತಿರುವ 20 ಪುನರ್ವಸತಿ ಮತ್ತು ಪುನರ್ನಿರ್ಮಾಣ ಕೇಂದ್ರಗಳಿಗಾಗಿ ಎಷ್ಟು ಎಕರೆ ಜಮೀನುಗಳನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ; ಅವುಗಳು ಯಾವ ಹಂತದಲ್ಲಿವೆ ;

(ಆ) ಉಳಿದ ಗ್ರಾಮಗಳಿಗೆ ಯಾವ ಕಾಲಮಿತಿಯಲ್ಲಿ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ;

(ಇ) ಯಾವ ಯಾವ ಗ್ರಾಮಗಳು ಸದರಿ ಭೂಸ್ವಾಧೀನ ವ್ಯಾಪ್ತಿಯಲ್ಲಿವೆ ; (ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

(ಈ) ಭೂಸ್ವಾಧೀನ ಪಡಿಸಿಕೊಂಡ ಜಮೀನುಗಳಿಗೆ ಪರಿಹಾರ ಒದಗಿಸಲಾಗಿದೆಯೇ; ಇಲ್ಲವಾದಲ್ಲಿ ಯಾವ ಕಾಲಮಿತಿಯಲ್ಲಿ ಸಂತ್ರಸ್ಥರಿಗೆ ಪರಿಹಾರ ನೀಡಲಾಗುವುದು;

(ಉ) ಭೂಸ್ವಾಧೀನ ಪಡಿಸಿಕೊಂಡ ಪುನರ್ವಸತಿ ಕೇಂದ್ರಗಳಲ್ಲಿ ಅಭಿವೃದ್ಧಿ ಕಾರ್ಯಗಳು ಪ್ರಾರಂಭವಾಗಿವೆಯೇ ; ಹಾಗಿದ್ದಲ್ಲಿ, ಅವುಗಳು ಯಾವ ಹಂತದಲ್ಲಿವೆ ? (ಪುನರ್ವಸತಿ ಕೇಂದ್ರವಾರು ಸಂಪೂರ್ಣ ವಿವರ ನೀಡುವುದು)